**ಬಾಸಾಃ 7 ಫ್ರಾಸಾಃ 6**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಬೆಳ್ತಂಗಡಿ**

**ಸಿಸಿ ಸಂಖ್ಯೆ: 2348/2023**

| | |
|---|---|
| ಹೆಸರು | : ಅಶ್ವತ್ ರಾಜ್ |
| ತಂದೆಯ ಹೆಸರು | : ಶ್ರೀಧರ ಪೂಜಾರಿ |
| ಪ್ರಾಯ | : 31 ವರ್ಷ |
| ಉದ್ಯೋಗ | : ಕೃಷಿ |
| ವಾಸ | : ಇಂದಬೆಟ್ಟು, ಬೆಳ್ತಂಗಡಿ ತಾಲೂಕು |

**ದಿನಾಂಕ 30.05.2025 ರಂದು ಸಾಕ್ಷಿಯನ್ನು ಕರೆಸಿ ವಿಧಿಬದ್ಧವಾಗಿ ಪ್ರಮಾಣವಚನ ಭೋಧಿಸಲಾಯಿತು.**

ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ

ಸಾಕ್ಷಿಗೆ ಎರಡು ದಾಖಲೆಗಳನ್ನು ತೋರಿಸಲಾಗಿ ಅವುಗಳಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ದಾಖಲೆಗಳನ್ನು ನಿಪಿ-7 ಮತ್ತು 8 ಎಂದು ಅವುಗಳಲ್ಲಿರುವ ಸಾಕ್ಷಿಯ ಸಹಿಗಳನ್ನು ನಿಪಿ-7(ಎ) ಮತ್ತು 8(ಎ)ಎಂದು ಗುರುತಿಸಲಾಯಿತು. ನಿಪಿ7 ಮತ್ತು 8 ಕ್ಕೆ ಕಿಲ್ಲೂರು ರಸ್ತೆಯಲ್ಲಿ ಹೋಗುವಾಗ ಪೊಲೀಸರು ನನ್ನ ಸಹಿ ಪಡೆದುಕೊಂಡಿರುತ್ತಾರೆ. ಆ ಸಮಯದಲ್ಲಿ ನನ್ನ ಜೊತೆ ಬೇರೆ ಯಾರು ಇರಲಿಲ್ಲ. ನಾನು ನೋಡಿದಾಗ ಸ್ಥಳದಲ್ಲಿ ಬೇರೆ ಏನು ಇತ್ತು ಎಂಬುದು ನನಗೆ ಗೊತ್ತಿಲ್ಲ. ಪೊಲೀಸರು ಯಾವ ಉದ್ದೇಶಕ್ಕೆ ಸ್ಥಳಕ್ಕೆ ಬಂದಿದ್ದರು ಎಂಬುದು ನನಗೆ ಗೊತ್ತಿಲ್ಲ. ಸಾಕ್ಷಿಗೆ ಎರಡು ಫೋಟೋವನ್ನು ತೋರಿಸಲಾಗಿ ಸದರಿ ಫೋಟೋಗಳಲ್ಲಿ ತಾವು ಇರುವುದಾಗಿ ನೋಡಿ ಗುರುತಿಸಿದ್ದು ಸದರಿ ಫೋಟೋಗಳನ್ನು ನಿಪಿ9 ಮತ್ತು 10 ಎಂದು ಗುರುತಿಸಲಾಯಿತು. ನಿಪಿ7 ಮತ್ತು 8 ರಲ್ಲಿ ಬರೆದಿರುವ ವಿಚಾರಗಳನ್ನು ತಿಳಿದುಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಸ.ಸ.ಅ ರವರಿಂದಃ**

ದಿಃ 7.5.2023 ರಂದು ಪೊಲೀಸರು ಇಂದಬೆಟ್ಟು ಗ್ರಾಮದ ಪಡಂಬಿಲ ಎಂಬಲ್ಲಿ ಮಹಜರ್ ಮಾಡಲು ಬಂದಿದ್ದರು ಎಂದರೆ ಗೊತ್ತಿಲ್ಲ. ಆಗ ಸ್ಥಳದಲ್ಲಿ ಚಾಸಾ6 ಮತ್ತು 8 ರವರು ಇದ್ದರು ಎಂದರೆ ಗೊತ್ತಿಲ್ಲ. 16 ಗಂಟೆಯಿಂದ 17 ಗಂಟೆಯವರೆಗೆ ಪೊಲೀಸರು ಸ್ಥಳದಲ್ಲಿ ಮಹಜರ್ ಮಾಡಿ ನಕ್ಷೆ ತಯಾರಿಸಿ ನಿಪಿ9 ಮತ್ತು 10 ರಂತೆ ಫೋಟೋವನ್ನು ತೆಗೆದು ಬಸ್ಸನ್ನು ಸಹ ಸ್ವಾಧೀನಪಡಿಸಿಕೊಂಡಿದ್ದಾರೆ ಎಂದರೆ ಸರಿಯಲ್ಲ. ನಾನು 10ನೇ ತರಗತಿಯವರೆಗೆ ವಿದ್ಯಾಭ್ಯಾಸ ಮಾಡಿದ್ದೇನೆ. ಯಾವುದೇ ದಾಖಲೆಗೆ ಸಹಿ ಮಾಡುವ ಪೂರ್ವದಲ್ಲಿ ಅದನ್ನು ಓದಿ ಸಹಿ ಮಾಡಬೇಕು ಎಂಬ ಸಾಮಾನ್ಯ ಜ್ಞಾನ ಇದೆಯಾ ಎಂದರೆ ಇಲ್ಲ. ನಿಪಿ7 ಮತ್ತು 8 ರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ತಿಳಿದಿದ್ದರೂ ಸಹ ನ್ಯಾಯಾಲಯದ ಮುಂದಿರುವ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.</u>

ಮರುವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಬೆಳ್ತಂಗಡಿ

(ಸಾ.ಓ.ಹೇ.ಕೇ.ಸ.ಇ.ಎ.ಒ)